Akashvani: Bangalore
National Bulletin In Kannada
15.01.2026 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

15.01.2026 : 13.10hrs

********

**ಮುಖ್ಯಾಂಶಗಳು :**

1. ಜಗತ್ತಿನ ಎಲ್ಲ ವೇದಿಕೆಗಳಲ್ಲೂ ಮಹತ್ವದ ವಿಷಯಗಳ ಪ್ರಸ್ತಾಪಕ್ಕೆ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ
2. ಸೈನಿಕರ ಅಚಲ 'ರಾಷ್ಟ್ರ ಮೊದಲು' ಎಂಬ ಮನೋಭಾವ ಪ್ರತಿಯೊಬ್ಬ ಭಾರತೀಯರಿಗೂ ಸ್ಫೂರ್ತಿ - ರಾಷ್ಟ್ರಪತಿ ದ್ರೌಪದಿ ಮುರ್ಮು
3. ಕರ್ನಾಟಕದಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಸುಗಮವಾಗಿ ಮುನ್ನಡೆಯಬೇಕು - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ಮಹಿಳಾ ಪ್ರೀಮಿಯರ್ ಲೀಗ್ ಟಿ-ಟ್ವೆಂಟಿ ಕ್ರಿಕೆಟ್ ; ಮುಂಬೈ ಇಂಡಿಯನ್ಸ್-ಯುಪಿ ವಾರಿಯರ್ಸ್ ನಡುವೆ ಮುಖಾಮುಖಿ

*********

ಪ್ರಧಾನಿ ನರೇಂದ್ರ ಮೋದಿ ಅವರು, ನವದೆಹಲಿಯಲ್ಲಿಂದು ೨೮ನೇ ಕಾಮನ್‌ವೆಲ್ತ್ ಸಭಾಧ್ಯಕ್ಷರು ಹಾಗೂ ಪೀಠಸೀನಾಧಿಕಾರಿಗಳ ಸಮ್ಮೇಳನ ಉದ್ಘಾಟಿಸಿದರು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು, ಈ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದಾರೆ. ಈ ಸಮ್ಮೇಳನದಲ್ಲಿ ೪೨ ದೇಶಗಳ ೬೧ ಸಭಾಧ್ಯಕ್ಷರು, ಹಾಗೂ ಪೀಠಸೀನಾಧಿಕಾರಿಗಳು ಮತ್ತಿತರ ಗಣ್ಯರು ಭಾಗವಹಿಸಿದ್ದಾರೆ. ಸಮ್ಮೇಳನ ಉದ್ದೇಶಿಸಿ ಮಾತಮಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಜಾಗತಿಕ ದಕ್ಷಿಣ ವಲಯದಲ್ಲಿ ಜಗತ್ತಿನ ಕಳವಳಗಳ ಬಗ್ಗೆ ಪರಿಣಾಮಕಾರಿಯಾಗಿ ಧ್ವನಿ ಎತ್ತುತ್ತಿದೆ. ಜಗತ್ತಿನ ಎಲ್ಲ ವೇದಿಕೆಗಳಲ್ಲೂ ಭಾರತ ಮಹತ್ವದ ವಿಷಯಗಳನ್ನು ಪ್ರಸ್ತಾಪಿಸುತ್ತಿದೆ ಎಂದರು.ಜಿ-೨೦ ಶೃಂಗಸಭೆಯ ಅಧ್ಯಕ್ಷತೆ ವಹಿಸಿದ್ದ ಸಂರ್ಭದಲ್ಲಿ ಭಾರತ ಜಾಗತಿಕ ದಕ್ಷಿಣ ವಲಯಕ್ಕೆ ವಿಶೇಷ ಆದ್ಯತೆ ನೀಡಿತು ಎಂದು

ಪ್ರಧಾನಿ ನರೇಂದ್ರ ಮೋದಿ ಸ್ಮರಿಸಿಕೊಂಡಿದ್ದಾರೆ. ಭಾರತಕ್ಕೆ ಸ್ವಾತಂತ್ರ್ಯ ದೊರೆತ ಸಂದರ್ಭದಲ್ಲಿ ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಅಸ್ತಿತ್ವದಲ್ಲಿ ಉಳಿಯುತ್ತದೆಯೇ ಎನ್ನುವ ಸಂದೇಹ ವ್ಯಕ್ತವಾಗಿತ್ತು. ಆದ್ದರಿಂದು ಭಾರತ ಅತಿದೊಡ್ಡ ಪ್ರಜಾತಂತ್ರ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಪ್ರಧಾನಿ ಹೇಳಿದ್ದಾರೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

*********

ಸೇನಾ ದಿನದ ಸಂದರ್ಭದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಧೈರ್ಯಶಾಲಿ ಸೈನಿಕರು, ಮಾಜಿ ಸೈನಿಕರು ಮತ್ತು ಅವರ ಕುಟುಂಬಗಳಿಗೆ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರಪತಿ ಮುರ್ಮು ಅವರು, ಭಾರತೀಯ ಸೇನೆಯು ರಾಷ್ಟ್ರದ ಏಕತೆ, ಸಾರ್ವಭೌಮತ್ವ ಮತ್ತು ಸಮಗ್ರತೆಯನ್ನು ಕಾಪಾಡುವಲ್ಲಿ ದೃಢವಾಗಿ ಉಳಿದಿದೆ ಎಂದು ಹೇಳಿದ್ದಾರೆ. ಭಾರತೀಯ ಸೈನಿಕರು ದೇಶದ ಗಡಿಗಳನ್ನು ರಕ್ಷಿಸುತ್ತಾರೆ ಮತ್ತು ವಿಪತ್ತುಗಳು ಮತ್ತು ಮಾನವೀಯ ಬಿಕ್ಕಟ್ಟುಗಳ ಸಮಯದಲ್ಲಿ ನಿರ್ಣಾಯಕ ನೆರವು ನೀಡುತ್ತಾರೆ. ಸೈನಿಕರ ಅಚಲವಾದ 'ರಾಷ್ಟ್ರ ಮೊದಲು' ಎಂಬ ಮನೋಭಾವವು ಪ್ರತಿಯೊಬ್ಬ ಭಾರತೀಯರಿಗೂ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಭಾರತೀಯ ಸೇನೆಯ ಧೈರ್ಯಶಾಲಿ ಅಧಿಕಾರಿಗಳು, ಸೈನಿಕರು ಮತ್ತು ಮಾಜಿ ಸೈನಿಕರಿಗೆ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರವನ್ನು ರಕ್ಷಿಸುವಲ್ಲಿ ಸೈನಿಕರ ಅಚಲ ಧೈರ್ಯ, ಶಿಸ್ತು ಮತ್ತು ಸರ್ವೋಚ್ಚ ತ್ಯಾಗವು ಪ್ರತಿಯೊಬ್ಬ ನಾಗರಿಕರಿಗೂ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಭಾರತೀಯ ಸೇನೆಯ ಧೈರ್ಯ ಮತ್ತು ದೃಢನಿಶ್ಚಯದ ಬದ್ಧತೆಗೆ ರಾಷ್ಟ್ರವು ನಮಸ್ಕರಿಸುತ್ತದೆ ಎಂದು ಮೋದಿ ಹೇಳಿದ್ದಾರೆ. ಸವಾಲಿನ ಪರಿಸ್ಥಿತಿಗಳಲ್ಲಿಯೂ ಸಹ ಸೈನಿಕರು  ನಿಸ್ವಾರ್ಥ ಸೇವೆಯ ಸಂಕೇತವಾಗಿ ನಿಲ್ಲುತ್ತಾರೆ. ರಾಷ್ಟ್ರವನ್ನು ರಕ್ಷಿಸುತ್ತಾರೆ. ಅವರ ಕರ್ತವ್ಯ ಪ್ರಜ್ಞೆಯು ದೇಶಾದ್ಯಂತ ಆತ್ಮವಿಶ್ವಾಸ ಮತ್ತು ಕೃತಜ್ಞತೆಯನ್ನು ಪ್ರೇರೇಪಿಸುತ್ತದೆ. ಕರ್ತವ್ಯದ ಸಾಲಿನಲ್ಲಿ ತಮ್ಮ ಪ್ರಾಣವನ್ನೇ ಅರ್ಪಿಸಿದ್ದಾರೆ ಎಂದು ಪ್ರಧಾನಿ ಸ್ಮರಿಸಿಕೊಂಡಿದ್ದಾರೆ.

*********

ಸರ್ಕಾರಿ ಅಧಿಕಾರಿಗಳು ಹಾಗೂ ಸಾರ್ವಜನಿಕವಾಗಿ ಗುಂಡಾವರ್ತನೆ ತೋರುವವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಲ್ಲವಾದಲ್ಲಿ ಸಮಾಜದಲ್ಲಿ ಅಹಿತಕರ ಘಟನೆಗಳು ಪದೇ ಪದೇ ಮರುಕಳಿಸುತ್ತವೆ. ಶಿಡ್ಲಘಟ್ಟದಲ್ಲಿ ಪುರಸಭೆ ಆಯುಕ್ತರ ಮೇಲೆ ದಬ್ಬಾಳಿಕೆ ನಡೆಸಿದವರ ಮೇಲೆ ಕಾನೂನು ರೀತಿ ಕ್ರಮ ತೆಗೆದುಕೊಳ್ಳಬೇಕು. ಅಧಿಕಾರಿಗಳಿಂದ ಕಾನೂನು ಬಾಹಿರವಾಗಿ ಕೆಲಸ ಮಾಡಿಸಬಾರದು. ಅಧಿಕಾರಿಗಳು ಸಹ ಆತ್ಮಸಾಕ್ಷಿಯಂತೆ ಕಾರ್ಯನಿರ್ವಹಿಸಬೇಕು ಎಂದರು. ತಾವು ರಾಜ್ಯ, ರಾಜಕಾರಣಕ್ಕೆ ಆಗಮಿಸುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯದ ಜನ ತೀರ್ಮಾನ ಕೈಗೊಳ್ಳಲಿದ್ದಾರೆ. ಜೆಡಿಎಸ್ ಹಾಗೂ ಬಿಜೆಪಿ ನಡುವಿನ ಮೈತ್ರಿ ಸುಗಮವಾಗಿ ಮುನ್ನಡೆಯಬೇಕು ಎಂಬುದು ತಮ್ಮ ಆಶಯವಾಗಿದೆ. ರಾಜ್ಯ, ರಾಜಕಾರಣದಲ್ಲೂ ತಮ್ಮ ಪಾತ್ರ ಇರುತ್ತದೆ. ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನೀಡಿರುವ ಎರಡು ಇಲಾಖೆಗಳಲ್ಲಿ ಉತ್ತಮ ಕೆಲಸ ಮಾಡಲು ಆದ್ಯತೆ ನೀಡುವುದಾಗಿ ತಿಳಿಸಿದರು.

*********

ನವದೆಹಲಿಯ ಭಾರತ್ ಮಂಟಪಂನಲ್ಲಿ ನಾಳೆ ನಡೆಯಲಿರುವ ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮದ ೧೦ ವರ್ಷಗಳ ಸಾರ್ಥಕ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಭಾರತದ ಚಲನಶೀಲ ನವೋದ್ಯಮ ಪರಿಸರ ವ್ಯವಸ್ಥೆಯ ಸದಸ್ಯರೊಂದಿಗೆ ಪ್ರಧಾನಿ ಸಂವಾದ ನಡೆಸಲಿದ್ದಾರೆ. ಆಯ್ದ ನವೋದ್ಯಮಗಳ ಪ್ರತಿನಿಧಿಗಳು ತಮ್ಮ ಉದ್ಯಮಶೀಲತಾ ಪ್ರಯಾಣದ ಒಳನೋಟಗಳನ್ನು ಹಂಚಿಕೊಳ್ಳಲಿದ್ದಾರೆ. ನಾವೀನ್ಯತೆಯನ್ನು ಪೋಷಿಸಲು, ಉದ್ಯಮಶೀಲತೆಯನ್ನು ಉತ್ತೇಜಿಸಲು ಮತ್ತು ಹೂಡಿಕೆ ಆಧಾರಿತ ಬೆಳವಣಿಗೆಯನ್ನು ಸಕ್ರಿಯಗೊಳಿಸಲು ರಾಷ್ಟ್ರೀಯ ಕಾರ್ಯಕ್ರಮವಾಗಿ ಸ್ಟಾರ್ಟ್‌ಅಪ್ ಇಂಡಿಯಾವನ್ನು ಪ್ರಧಾನಿ ಮೋದಿ ೨೦೧೬ರ ಜನವರಿ ೧೬ರಂದು ರಂದು ಪ್ರಾರಂಭಿಸಿದ್ದರು. ಭಾರತವನ್ನು ಉದ್ಯೋಗಾಕಾಂಕ್ಷಿಗಳ ಬದಲು ಉದ್ಯೋಗ ಸೃಷ್ಟಿಕರ್ತರ ರಾಷ್ಟ್ರವನ್ನಾಗಿ ಮಾಡುವುದು ಈ ಉಪಕ್ರಮದ ಉದ್ದೇಶವಾಗಿದೆ.

*********

ಇಂದು ದೇಶಾದ್ಯಂತ ಸಂಕ್ರಾಂತಿ ಹಬ್ಬವನ್ನು ಆಚರಿಸಲಾಗುತ್ತಿದೆ. ಕರ್ನಾಟಕದಲ್ಲೂ ಸಂಕ್ರಾಂತಿ ಸಂಭ್ರಮ ಮನೆ ಮಾಡಿದೆ. ಬೆಂಗಳೂರಿನ ಗವಿ ಗಂಗಾಧರೇಶ್ವರ ದೇವಸ್ಥಾನದಲ್ಲಿ ಸಂಜೆ ಸೂರ್ಯರಶ್ಮಿಯನ್ನು ಕಣ್ತುಂಬಿಕೊಳ್ಳಲು ಭಕ್ತಾದಿಗಳು ಕಾತರದಿಂದ ಕಾಯುತ್ತಿದ್ದಾರೆ. ಸುಗ್ಗಿಯ ಸಂಕೇತವಾದ ಪೊಂಗಲ್ ಹಬ್ಬವನ್ನು ಪ್ರಪಂಚದಾದ್ಯಂತ ತಮಿಳು ಭಾಷಿಕ ಜನ ಆಚರಿಸುತ್ತಾರೆ. ಇದು ತಮಿಳು ಪಂಚಾಂಗದಲ್ಲಿ ವಸಂತಕಾಲದ ಆರಂಭವೂ ಆಗಿದೆ. ಥಾಯ್ ಮಾಸ ಜೀವನದ ಎಲ್ಲಾ ಅಂಶಗಳಲ್ಲಿ ಹೊಸ ಆರಂಭವನ್ನು ತರುತ್ತದೆ. ಮದುವೆಗಳ ಹೊಸ ವ್ಯವಹಾರಗಳಿಗೆ ಇದು ಶುಭವೆಂದು ಪರಿಗಣಿಸಲಾಗಿದೆ. ಈ ದಿನದಂದು, ಸುಗ್ಗಿಯ ನಂತರದ ಕೊಯ್ಲನ್ನು ಸೂರ್ಯನಿಗೆ ಅರ್ಪಿಸಲಾಗುತ್ತದೆ. ಥಾಯ್ ಪಿರಾಂತಲ್ ವಜಿ ಪಿರಕ್ಕುಮ್ ಎಂಬುದು ಹಳೆಯ ಮಾತು. ಇದರರ್ಥ ಈ ತಿಂಗಳು ಕೆಲಸಗಳನ್ನು ಸಾಧಿಸಲು ದಾರಿ ಮಾಡಿಕೊಡುತ್ತದೆ. ಜನತೆ ಕುಟುಂಬ ಮತ್ತು ಸಂಬಂಧಿಕರೊಂದಿಗೆ ಹಬ್ಬವನ್ನು ಆಚರಿಸುತ್ತಿದ್ದಾರೆ. ಸಣ್ಣ ಪೆಂಡಾಲ್ ನಿರ್ಮಿಸಿ ರಂಗೋಲಿಯ ಮಧ್ಯದಲ್ಲಿ ಹೊಸ ಮಣ್ಣಿನ ಮಡಕೆಯನ್ನು ಇಡುವ ದೃಶ್ಯಗಳು ಕಣ್ಣಿಗೆ ಹಬ್ಬವಾಗಿವೆ. ಮಣ್ಣಿನ ಮಡಕೆಯನ್ನು ಅರಿಶಿನ ಸಸ್ಯಗಳಿಂದ ಅಲಂಕರಿಸಲಾಗುತ್ತದೆ. ಪೊಂಗಲ್ ಅನ್ನು ಅಕ್ಕಿ, ಹಾಲು ಮತ್ತು ಬೆಲ್ಲದಿಂದ ಬೇಯಿಸಲಾಗುತ್ತದೆ. ಮಣ್ಣಿನ ಮಡಕೆ ತುಂಬಿದಾಗ ಕುಟುಂಬವು ಪೊಂಗಲೋ ಪೊಂಗಲ್ ಎಂದು ಕೂಗುತ್ತದೆ. ಅಂದರೆ ಉಡುಗೊರೆಯ ನಂತರ ಉಡುಗೊರೆ ಎಂಬುದು ಇದರರ್ಥ.

*********

ಇಂದು ೭೮ನೇ ಸೇನಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರು, ಸೇನಾ ಮುಖ್ಯಸ್ಥರಾಗಿ ಪದಗ್ರಹಣ ಮಾಡಿದ ದಿನವಾದ ಜನವರಿ ೧೫ರಂದು ಪ್ರತಿವರ್ಷ ಸೇನಾ ದಿನ ಎಂದು ಆಚರಣೆ ಮಾಡಲಾಗುತ್ತಿದೆ. ಕೆ.ಎಂ. ಕಾರ್ಯಪ್ಪ ಅವರು, ಭಾರತದ ಮೊದಲ ಸೇನಾ ಮುಖ್ಯಸ್ಥರಾಗಿ ದೇಶದ ಸೈನ್ಯವನ್ನು ಮುನ್ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಜೈಪುರದಲ್ಲಿಂದು ಬೆಳಗ್ಗೆಯಿಂದಲೇ ವಿಭಿನ್ನ ಸೇನಾ ಪ್ರದರ್ಶನ ಕಾರ್ಯಕ್ರಮ ನಡೆಯುತ್ತಿದೆ. ಜಗತ್ಪುರದ ಮಹಲ್ ರಸ್ತೆಯಲ್ಲಿ ಸಹಸ್ರಾರು ಪ್ರೇಕ್ಷಕರ ಮುಂದೆ ಸೇನೆಯು ತನ್ನ ಶಿಸ್ತು, ಶಕ್ತಿ ಮತ್ತು ಆಧುನಿಕ ಸೇನಾ ಸಾಮರ್ಥ್ಯ ಪ್ರದರ್ಶಿಸುತ್ತಿದೆ. ಬೆಳಗ್ಗೆ ೧೦ ಗಂಟೆಗೆ ಭವ್ಯ ಕಾರ್ಯಕ್ರಮ ಆರಂಭವಾಗಿದ್ದು, ರಾಜಸ್ಥಾನ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಮತ್ತು ಸೇನಾ

ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಮೆರವಣಿಗೆಯಲ್ಲಿ ಭಾಗವಹಿಸಿದರು.ಈ ವರ್ಷದ ಆಚರಣೆಯು ವಿಶೇಷ ಮಹತ್ವ ಹೊಂದಿದ್ದು, ಇದೇ ಮೊದಲ ಬಾರಿಗೆ ಸೇನಾ ದಿನಾಚರಣೆಯನ್ನು ಸಾಂಪ್ರದಾಯಿಕ ಕಂಟೋನ್ಮೆಂಟ್ ಪ್ರದೇಶದ ಹೊರಗೆ ಏರ್ಪಡಿಸಿರುವುದು ವಿಶೇಷವಾಗಿದೆ. ಈ ಕಾರ್ಯಕ್ರಮ ಸೇನೆಯ ಸಂಪ್ರದಾಯಗಳು, ಶಿಸ್ತು ಮತ್ತು ಅದರ ನಿರಂತರ ವಿಕಸನದ ಸಾಮರ್ಥ್ಯಗಳನ್ನು ಜನ ಸಾಮಾನ್ಯರು ವೀಕ್ಷಿಸಲು ಇದೊಂದು ಅನನ್ಯ ಅವಕಾಶವಾಗಿದೆ. ಯುದ್ಧಭೂಮಿಯಲ್ಲಿ ಸೇನೆಯ ತಂತ್ರಜ್ಞಾನ-ಚಾಲಿತ ಶಕ್ತಿಯನ್ನು ಸಹ ಮೆರವಣಿಗೆಯಲ್ಲಿ ಪ್ರದರ್ಶಿಸಲಾಗುತ್ತಿದೆ.

*********

ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ ಟಿ-ಟ್ವೆಂಟಿ ಕ್ರಿಕೆಟ್‌ನಲ್ಲಿ ಮುಂಬೈ ಇಂಡಿಯನ್ಸ್ ಮಹಿಳೆಯರು ನವಿ ಮುಂಬೈನಲ್ಲಿ ಯುಪಿ ವಾರಿಯರ್ಸ್ ವನಿತೆಯರನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೭.೩೦ಕ್ಕೆ ಪ್ರಾರಂಭವಾಗಲಿದೆ. ನಿನ್ನೆ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ಯುಪಿ ವಾರಿಯರ್ಸ್ ವಿರುದ್ಧ ೭ ವಿಕೆಟ್‌ಗಳ ಅಂತರದ ಜಯ ಸಾಧಿಸಿತು.

*********

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸೇನಾ ದಿನದಂದು ಭಾರತೀಯ ಸೇನಾ ಸಿಬ್ಬಂದಿ ಮತ್ತು ಅವರ ಕುಟುಂಬಗಳಿಗೆ ಶುಭಾಶಯ ಕೋರಿದ್ದಾರೆ. ದೇಶದ ಸಾರ್ವಭೌಮತ್ವ ಮತ್ತು ಸಮಗ್ರತೆಯನ್ನು ಕಾಪಾಡುವಲ್ಲಿ ಭಾರತೀಯ ಸೇನೆಯ ಅದಮ್ಯ ಧೈರ್ಯ, ಸರ್ವೋಚ್ಚ ತ್ಯಾಗ ಮತ್ತು ಅಚಲ ಬದ್ಧತೆಗೆ ರಾಷ್ಟ್ರವು ನಮಸ್ಕರಿಸುತ್ತದೆ ಎಂದು ಅವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಗಡಿಗಳಲ್ಲಿ ಸದಾ ಜಾಗರೂಕರಾಗಿರುವ ಮತ್ತು ಬಿಕ್ಕಟ್ಟಿನ ಸಮಯದಲ್ಲಿ ದೃಢನಿಶ್ಚಯ ಹೊಂದಿರುವ ಭಾರತೀಯ ಸೇನೆಯು ತನ್ನ ವೃತ್ತಿಪರತೆ, ಶಿಸ್ತು ಮತ್ತು ಮಾನವೀಯ ಸೇವೆಯ ಮೂಲಕ ಜಾಗತಿಕ ಗೌರವವನ್ನು ಗಳಿಸಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

****END****